# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 561 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ನಿರಾಣಿ ಹನುಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 22.12.2022 |
| ಉತ್ತರಿಸುವ ಸಚಿವರು | : | ಮುಖ್ಯಮಂತ್ರಿ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕಳೆದ ಎರಡು ವರ್ಷಗಳಲ್ಲಿ ರಾಜ್ಯಾದ್ಯಂತ ಬಿ.ಪಿ.ಎಲ್ ಕಾರ್ಡ್‌ಗಾಗಿ ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು; ಈ ಪೈಕಿ ಪುರಸ್ಕೃತ ಮತ್ತು ತಿರಸ್ಕೃತ ಅರ್ಜಿಗಳ ಸಂಖ್ಯೆ ಎಷ್ಟು;(ಜಿಲ್ಲಾವಾರು ಮಾಹಿತಿ ನೀಡುವುದು) | ರಾಜ್ಯದಲ್ಲಿ 2019-20 ರಿಂದ 2021-22 ಸಾಲುಗಳಲ್ಲಿ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಅರ್ಜಿ ಸಲ್ಲಿಸಿರುವವರ, ಸಂಖ್ಯೆ:12,14,225. 5,83,717 ಅರ್ಜಿಗಳು ಅನುಮೋದಿಸಲ್ಪಟ್ಟಿರುತ್ತವೆ. 2,76,158 ಅರ್ಜಿಗಳು ತಿರಸ್ಕೃತಗೊಂಡಿರುತ್ತವೆ.<br>ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ. |
| ಆ | ಬಿ.ಪಿ.ಎಲ್ ಕಾರ್ಡ್ ಹೊಂದಿದ್ದ ಉಳ್ಳವರು ವಾಪಸ್ಸು ನೀಡುವಂತೆ ಸರ್ಕಾರ ಆದೇಶಿಸಿದ ನಂತರ ಎಷ್ಟು ಕಾರ್ಡ್‌ಗಳನ್ನು ವಾಪಸ್ ನೀಡಲಾಗಿದೆ ಹಾಗೂ ಎಷ್ಟು ಕಾರ್ಡ್‌ಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು) | ಅನರ್ಹರು ಹೊಂದಿದ್ದ ಪಡಿತರ ಚೀಟಿಗಳನ್ನು ರದ್ದುಪಡಿಸಿದ/ ಆದ್ಯತಾ ಪಡಿತರ ಚೀಟಿಯಾಗಿ ಪರಿವರ್ತಿಸಿದ ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-2A ರಲ್ಲಿ ಒದಗಿಸಲಾಗಿದೆ. ಸ್ವಯಂ ಪ್ರೇರಿತರಾಗಿ ಅದ್ಯರ್ಪಣೆ ಮಾಡಿದ ಪಡಿತರ ಚೀಟಿಗಳ ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-2B ರಲ್ಲಿ ಒದಗಿಸಲಾಗಿದೆ. |
| ಇ | ಇಲ್ಲಿಯವರೆಗೆ ಅರ್ಜಿ ಸಲ್ಲಿಸಿದರಿಗೆ ಇನ್ನು ಬಿ.ಪಿ.ಎಲ್ ಕಾರ್ಡ್ ವಿತರಿಸದಿರಲು ಕಾರಣಗಳೇನು; ಇದರಿಂದ ಎಷ್ಟು ಕುಟುಂಬಗಳು ಬಿ.ಪಿ.ಎಲ್ ಕಾರ್ಡ್ ಇಲ್ಲದಿರುವುದಕ್ಕಾಗಿ ಆಹಾರ ಧಾನ್ಯವಿಲ್ಲದೆ ಉಚಿತ ಸೇವೆ ಕೂಡ ಸಿಗದೆ ಪರದಾಡುವಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | ಆದ್ಯತಾ ಪಡಿತರ ಚೀಟಿಯನ್ನು ಕೋರಿ ಸಲ್ಲಿಸಲಾಗಿರುವ ಅರ್ಜಿಗಳಲ್ಲಿ ಪರಿಶೀಲನಾ ಕಾರ್ಯವನ್ನು ಕೈಗೊಳ್ಳಲಾಗಿದ್ದು, ಅರ್ಹ ಅರ್ಜಿದಾರರಿಗೆ ಆದ್ಯತಾ ಪಡಿತರ ಚೀಟಿಯನ್ನು ವಿತರಿಸಲಾಗುತ್ತಿದೆ. |

**ಆನಾಸ 214 ಡಿಆರ್‌ಎ 2022 (ಇ-ಆಫೀಸ್)**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ